**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ-72ರಡಿ ಗಮನ ಸೆಳೆಯುವ ಸೂಚನೆಗೆ ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರ ಉತ್ತರ**

ವಿಷಯಃ ಮೈಸೂರು ಜಿಲ್ಲೆ ಹೆಚ್. ಡಿ.ಕೋಟೆ ಮತ್ತು ಸರಗೂರು ತಾಲ್ಲೂಕುಗಳ ಅರಣ್ಯ ಪ್ರದೇಶದ ಗಡಿಭಾಗದಲ್ಲಿರುವ ಬಂಕವಾಡಿ ಮತ್ತಿತರ ಗ್ರಾಮಗಳ ರೈತರ ಜಮೀನಿಗೆ ಆನೆಗಳು ದಾಳಿ ನಡೆಸಿ, ಬೆಳೆಹಾನಿ ಉಂಟಾಗುತ್ತಿದೆ. ಬೆಳೆಹಾನಿಗೆ ಸೂಕ್ತ ಪರಿಹಾರ ರೈತರಿಗೆ ಸಿಗುತ್ತಿಲ್ಲ. ಈಗಾಗಲೇ ಪ್ರಾರಂಭ ಮಾಡಿ, ಮುಕ್ತಾಯ ಹಂತದಲ್ಲಿರುವ ರೈಲ್ವೆ ಕಂಬಿ ತಡೆಗೋಡೆ (ಬ್ಯಾರಿಕೇಡ್) ಪೂರ್ಣಗೊಳಿಸುವಲ್ಲಿ ವಿಳಂಬವಾಗಿ (ಉಂಟಾಗಿರುವುದರಿಂದ) ನಿರಂತರ ಆನೆ ದಾಳಿಯಿಂದ ಬೆಳೆಹಾನಿ ಉಂಟಾಗುತ್ತಿರುವುದರಿಂದ ರೈತರು ತುಂಬಾ ತೊಂದರೆಗೊಳಗಾಗಿರುವ ಗಂಭೀರ ಸಮಸ್ಯೆ ಕುರಿತ ಮಾನ್ಯ ಅರಣ್ಯ, ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯಬಯಸುತ್ತೇನೆ.

* * * *

ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಬೆಳೆ ಹಾನಿ ಪ್ರಕರಣಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಅಪಜೀ-130- ಎಫ್‌ಡಬ್ಲ್ಯೂಎಲ್ 2016, ದಿನಾಂಕ: 19/9/2016ರಲ್ಲಿ ನಿಗಧಿಪಡಿಸಿದ ದರಗಳಂತೆ ನಷ್ಟವಾದ ಬೆಳೆಯ ಪ್ರಮಾಣಕ್ಕನುಗುಣವಾಗಿ ಸಂಬಂಧಿತ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಬೆಳೆ ಹಾನಿ ಪ್ರಕರಣಗಳಲ್ಲಿ ಇಲಾಖಾ ಸಿಬ್ಬಂದಿಗಳು ಸ್ಥಳ ಪರಿಶೀಲನೆ ನಡೆಸಿ, ಹಾನಿ ಉಂಟಾಗಿರುವ ಬೆಳೆಯ ಮೌಲ್ಯಮಾಪನ ಮಾಡಿ ಸದರಿ ಆದೇಶದಲ್ಲಿ ನಿಗಧಿಪಡಿಸಿದ ದರಗಳನ್ವಯ ರೈತರ ಹೆಸರಿನ ಬ್ಯಾಂಕ್ ಖಾತೆಗೆ ನೇರವಾಗಿ ಇ-ಪರಿಹಾರ ತಂತ್ರಾಂಶದ ಮುಖಾಂತರ ಪರಿಹಾರ ಧನವನ್ನು ತ್ವರಿತವಾಗಿ ಪಾವತಿಸಲಾಗುತ್ತಿದೆ.

ಮುಂದುವರೆದು 2021-22ನೇ ಸಾಲಿಗೆ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಹಾನಿ ಪ್ರಕರಣಗಳಿಗೆ ನಿಯಮಾನುಸಾರ ಪರಿಶೀಲಿಸಿ, ದಯಾತ್ಮಕ ಧನ ಪಾವತಿಸಲು ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆ ತಾಲ್ಲೂಕು ವ್ಯಾಪ್ತಿಗೆ ಬರುವ ವಿಭಾಗಗಳಿಗೆ ಕೆಳಕಂಡಂತೆ ಅನುದಾನ ಹಂಚಿಕೆ ಮಾಡಲಾಗಿದೆ.

| ಕ್ರ. ಸಂ. | ವಿಭಾಗ | ಬಿಡುಗಡೆ ಮಾಡಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ | 34.00 |
| 2 | ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ | 56.00 |
| 3 | ಮೈಸೂರು ಪ್ರಾದೇಶಿಕ ವಿಭಾಗ | 10.00 |

ಮೈಸೂರು ಜಿಲ್ಲೆಯ ಹೆಚ್. ಡಿ.ಕೋಟೆ ತಾಲ್ಲೂಕಿನ ಭಾಗಶಃ ಪ್ರದೇಶವು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಗೊಳಪಡುತ್ತಿದ್ದು, ಕಾಡಾನೆ ಹಾವಳಿ ನಿಯಂತ್ರಿಸುವುದಕ್ಕಾಗಿ 19.892 ಕಿ.ಮೀ. ಉದ್ದದ ರೈಲ್ವೆ ಬ್ಯಾರಿಕೇಡ್ ಈಗಾಗಲೇ ನಿರ್ಮಿಸಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ 3.461 ಕಿ.ಮೀ. ಉದ್ದದ ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಪ್ರಗತಿಯಲ್ಲಿದೆ.

ಅಲ್ಲದೇ, ಹೆಚ್.ಡಿ.ಕೋಟೆ ಮತ್ತು ಸರಗೂರು ತಾಲ್ಲೂಕುಗಳ ವ್ಯಾಪ್ತಿಗೆ ಬರುವ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯ ಅರಣ್ಯ ಪ್ರದೇಶದ ಗಡಿ ರೇಖೆಯಲ್ಲಿ ಕಾಡಾನೆ ಹಾವಳಿ ನಿಯಂತ್ರಿಸುವುದಕ್ಕಾಗಿ ಈಗಾಗಲೇ 36.34 ಕಿ.ಮೀ. ಉದ್ದದ ರೈಲ್ವೆ ಬ್ಯಾರಿಕೇಡ್‌ನ್ನು ನಿರ್ಮಿಸಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ 1.03 ಕಿ.ಮೀ. ಉದ್ದದ ರೈಲ್ವೆ ಬ್ಯಾರಿಕೇಡ್ ನಿರ್ಮಾಣದ ಕಾಮಗಾರಿ ಪ್ರಗತಿಯಲ್ಲಿದೆ.

ಸಂಖ್ಯೆ: ಎಫ್‌ಇಇ 202 ಎಫ್‌ಡಬ್ಲ್ಯೂಎಲ್ 2021

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕ ವ್ಯವಹಾರಗಳ ಸಚಿವರು